Subject: Construction of New Court Complex at Kundapura.

2769 (4042)

Sri K.Pratap Chandrashetty (Kundapur): Will the Hon'ble Law and Parliamentary Affairs and Legislation, Information and Publicity be Pleased to State?

A) What is the estimated cost of newly constructed Court Complex at Kundapura?

B) When will it be completed?

Sri M.C.Nanaiah (Law and Parlimantary Affairs and Legislation, Information and Publicity).

A) Rs. 60.00 Lakhs

B) As per the agreement, construction of the building is to be completed by January 1999.

ವಿಷಯ: ಮೀನುಗಾರಿಕೆ ಮನೆ ವಿತರಣೆ ಯೋಜನೆ.

2770 (4176)

ಶ್ರೀ ಜಿ.ವಿ.ಶ್ರೀರಾಮರೆಡ್ಡಿ (ಬಾಗೇಪಲ್ಲಿ): ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಮೀನುಗಾರರ ಒಟ್ಟು ಸಂಖ್ಯೆ ಎಷ್ಟು?

ಆ) ರಾಜ್ಯದ ಮೀನುಗಾರರಿಗೆ ಮನೆ ವಿತರಣೆ ಯೋಜನೆಯನ್ನು ಎಂದಿನಿಂದ ಪ್ರಾರಂಭಿಸಲಾಗಿದೆ?

ಇ) ಈ ಮೀನುಗಾರರಿಗೆ ಖಾಲಿ ಎಷ್ಟು ಮನೆಗಳನ್ನು ವಿತರಣೆ ಮಾಡಲಾಗಿದೆ?

ಈ) ಇಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಕೆ.ಜಯಪ್ರಕಾಶ್ ಹೆಗ್ಡೆ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು):

ಅ) ರಾಜ್ಯದಲ್ಲಿ ಒಟ್ಟು 8,10,470 ಮೀನುಗಾರರು ಇದ್ದು ಇವರಲ್ಲಿ 1,83,830 ಕಾರ್ಯನಿರತ ಮೀನುಗಾರರಾಗಿರುವರು.

ಆ) 1987-88 ರಿಂದ ಕೇಂದ್ರ ಪುರಸ್ಕೃತ ಮೀನುಗಾರರ ಕಲ್ಯಾಣ ಯೋಜನೆಯಡಿಯಲ್ಲಿ ನಿರ್ವಸತಿ ಬಡ ಮೀನುಗಾರರಿಗೆ ವಸತಿ ಸೌಲಭ್ಯವನ್ನು ಒದಗಿಸಲಾಗುತ್ತಿದೆ.

ಇ) 1457.

ಈ) ಉದ್ಭವಿಸುವುದಿಲ್ಲ.

ವಿಷಯ: ರಾಜ್ಯದಲ್ಲಿ ನಿರುದ್ಯೋಗ ಸಮಸ್ಯೆ ಬಗೆಹರಿಸುವುದು

2772 (3332)

ಶ್ರೀ ಹೆಚ್.ಎಸ್.ಶಂಕರಲಿಂಗೇಗೌಡ (ಚಾಮರಾಜ): ಮಾನ್ಯ ಉಪ ಮುಖ್ಯಮಂತ್ರಿಗಳು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ನಿರುದ್ಯೋಗಿಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ತಿಳಿಸಿ)

ಆ) ನಿರುದ್ಯೋಗ ಸಮಸ್ಯೆ ಬಗೆಹರಿಸುವ ಬಗ್ಗೆ ಸರ್ಕಾರದ ಹಿಂದಿನ ಯೋಜನೆಗಳೇನು ಮುಂದಿನ ಹೊಸ ಯೋಜನೆಗಳೇನು?

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು):

ಅ) ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ 1997ನೇ ಜೂನ್ ಮಾಹೆಯ ಅಂತ್ಯದಲ್ಲಿ 17,86,058 ಅಭ್ಯರ್ಥಿಗಳ ಹೆಸರನ್ನು ನೊಂದಾಯಿಸಿಕೊಂಡಿರುತ್ತಾರೆ. (ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ)

ಆ) ನಿರುದ್ಯೋಗ ಸಮಸ್ಯೆಯನ್ನು ಕಡಿಮೆ ಮಾಡಲು ಸರ್ಕಾರವು ಹಲವಾರು ಉದ್ಯೋಗವನ್ನು ಒದಗಿಸುವ ಯೋಜನೆಗಳಾದ ಪ್ರಧಾನ ಮಂತ್ರಿಯವರ ರೋಜ್‌ಗಾರ್ ಯೋಜನೆ, ನೆಹರು ರೋಜಗಾರ್ ಯೋಜನೆ, ಸಮಗ್ರ ಗ್ರಾಮೀಣ ಉದ್ಯೋಗಾವಕಾಶ ಕಲ್ಪಿಸುವ ಕಾರ್ಯಕ್ರಮ, ನೆಮ್ಮದಿ ಕಾರ್ಯಕ್ರಮ, ಉದ್ಯೋಗ ಭರವಸೆ ಯೋಜನೆ ಹಾಗೂ ವಾಣಿಜ್ಯ ಬ್ಯಾಂಕುಗಳು, ಕರ್ನಾಟಕ ರಾಜ್ಯ ಹಣಕಾಸು ನಿಗಮ, ಪರಿಶಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಅಭಿವೃದ್ಧಿ ನಿಗಮ, ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಮಹಿಳಾ ಅಭಿವೃದ್ಧಿ ನಗಮ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಇತ್ಯಾದಿ ಸಂಸ್ಥೆಗಳು ಸ್ವಯಂ ಉದ್ಯೋಗಕ್ಕೆ ಪುರಸ್ಕರಿಸುವ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದೆ.